## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ನಡೆದಿರುವ ಕಾಮಗಾರಿಗಳ ಅವ್ಯವಹಾರದ ಬಗ್ಗೆ ಶಿಸ್ತುಕ್ರಮ.

**ಓದಲಾಗಿದೆ:**

1. ಜಲಾನಯನ ಅಭಿವೃದ್ಧಿ ಆಯುಕ್ತರ ಕಛೇರಿಯ ಪತ್ರ ಸಂಖ್ಯೆ:ಜಅಇ/ಆಡಳಿತ-3/ವಿನಿ-6/20/2009-10 ದಿನಾಂಕ: 09-08-2011.
2. ಸರ್ಕಾರದ ಕಾರಣ ಕೇಳುವ ಪತ್ರ ಸಂಖ್ಯೆ: ಕೃಇ 63 ಕೃಪವಿ 2011, ದಿನಾಂಕ: 13-08-2013.
3. ಶ್ರೀ ಹೆಚ್.ಜಿ.ಶಿವರುದ್ರಪ್ಪ, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಇವರ ಲಿಖಿತ ಹೇಳಿಕೆ ದಿನಾಂಕ: 03-10-2013.
4. ಶ್ರೀ ಎಂ.ದಿವಾಕರ್, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ), ಇವರ ಲಿಖಿತ ಹೇಳಿಕೆ ದಿನಾಂಕ: 03-10-2013.
5. ಶ್ರೀ ಬಸವರಾಜ ಮನ್ನಾಳ, ಸಹಾಯಕ ಕೃಷಿ ಅಧಿಕಾರಿ, ಇವರ ಲಿಖಿತ ಹೇಳಿಕೆ ದಿನಾಂಕ: 03-10-2013.

*********

**ಪ್ರಸ್ತಾವನೆ:**

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ನಡೆದಿರುವ ಕಾಮಗಾರಿಗಳ ಅವ್ಯವಹಾರದ ಬಗ್ಗೆ ಶಿಸ್ತುಕ್ರಮ ಕೈಗೊಳ್ಳಲು ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು, ಕರ್ನಾಟಕ ನಾಗರಿಕ ಸೇವಾ(ಸಿ.ಸಿ.ಎ) ನಿಯಮಾವಳಿ 1957ರ ನಿಯಮ 11ರಡಿ ದೋಷಾರೋಪಣಾ ಪಟ್ಟಿಯನ್ನು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1) ಶ್ರೀ ಹೆಚ್.ಜಿ.ಶಿವರುದ್ರಪ್ಪ, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.
2) ಶ್ರೀ ಎಂ.ದಿವಾಕರ್, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ), ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.
3) ಶ್ರೀ ಬಸವರಾಜ ಮನ್ನಾಳ, ಸಹಾಯಕ ಕೃಷಿ ಅಧಿಕಾರಿ, ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.

ಮೇಲ್ಕಂಡ ಕೃಷಿ ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ, ಅಧಿಕಾರಿಗಳಿಗೆ ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಪತ್ರದಲ್ಲಿ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಜಾರಿ ಮಾಡಲಾಗಿತ್ತು. ಸದರಿ ಅಧಿಕಾರಿಗಳು ಕ್ರಮಾಂಕ 3 ರಿಂದ 5 ರವರೆಗೆ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ದೋಷಮುಕ್ತರನ್ನಾಗಿ ಮಾಡಬೇಕೆಂದು ಕೋರಿರುತ್ತಾರೆ. ಸದರಿ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಅವರ ಮೇಲಿನ ಆರೋಪಗಳೊಂದಿಗೆ ತುಲನಾತ್ಮಕವಾಗಿ ಪರಿಶೀಲಿಸಲಾಗಿ ಅವರ ಹೇಳಿಕೆಗಳಲ್ಲಿ ಪರಿಗಣಿಸುವಂತಹ ಅಂಶಗಳು ಇಲ್ಲವಾದ್ದರಿಂದ ಪ್ರಕರಣದಲ್ಲಿ ಇಲಾಖಾ ವಿಚಾರಣೆಯನ್ನು ನಡೆಸುವ ಮೂಲಕ ಸತ್ಯಾಸತ್ಯತೆಯನ್ನು ತಿಳಿಯಲು ತೀರ್ಮಾನಿಸಿ, ಅದರಂತೆ ಶ್ರೀ ಪ್ರಹ್ಲಾದಾಚಾರ್ಯ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಆಡಳಿತ ಸಹಾಯಕರು,

ಜಲಾನಯನ ಅಭಿವೃದ್ದಿ ಇಲಾಖೆ, ಕೇಂದ್ರ ಕಛೇರಿ, ಕಾವೇರಿಭವನ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 63 ಕೃಪವಿ 2011.**
**ಬೆಂಗಳೂರು. ದಿನಾಂಕ: 13-02-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಜಲಾನಯನ ಅಭಿವೃದ್ದಿ ಇಲಾಖೆಯಲ್ಲಿ ನಡೆದಿರುವ ಕಾಮಗಾರಿಗಳ ಅವ್ಯವಹಾರದ ಆರೋಪಗಳ ಬಗ್ಗೆ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಜೊತೆಗೆ ಓದಲಾದ ನಿಯಮ 13ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು, 11ರ ಉಪ ನಿಯಮ 2ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ ಶ್ರೀ ಪ್ರಹ್ಲಾದಾಚಾರ್ಯ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

1) ಶ್ರೀ ಹೆಚ್.ಜಿ.ಶಿವರುದ್ರಪ್ಪ, ತಾಲ್ಲೂಕು ಜಲಾನಯನ ಅಭಿವೃದ್ದಿ ಅಧಿಕಾರಿ, ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.
2) ಶ್ರೀ ಎಂ.ದಿವಾಕರ್, ಸಹಾಯಕ ಕೃಷಿ ಅಧಿಕಾರಿ(ನಿವೃತ್ತ), ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.
3) ಶ್ರೀ ಬಸವರಾಜ ಮನ್ಯಾಳ, ಸಹಾಯಕ ಕೃಷಿ ಅಧಿಕಾರಿ, ಹೊಸದುರ್ಗ, ಚಿತ್ರದುರ್ಗ ಜಿಲ್ಲೆ.

ಹಾಗೂ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 5(ಸಿ)ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಸ್ತು ಪ್ರಾಧಿಕಾರಿಯ ಪರವಾಗಿ ವಿಷಯ ಮಂಡಿಸಲು, ಆಡಳಿತ ಸಹಾಯಕರು, ಜಲಾನಯನ ಅಭಿವೃದ್ದಿ ಇಲಾಖೆ, ಕೇಂದ್ರ ಕಛೇರಿ, ಕಾವೇರಿಭವನ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಅಕೌಂಟ್ಸ್ ಅಫೀಸರ್, ಜಿ-5, ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ), ಹೊಸಕಟ್ಟಡ, ಬೆಂಗಳೂರು-1.
2. ಆಯುಕ್ತರು, ಕೃಷಿ/ಜಲಾನಯನ ಅಭಿವೃದ್ದಿ ಇಲಾಖೆ, ಬೆಂಗಳೂರು.
3. ಜಿಲ್ಲಾ ಜಲಾನಯನ ಅಭಿವೃದ್ದಿ ಅಧಿಕಾರಿ, ಚಿತ್ರದುರ್ಗ,
4. ಶ್ರೀ ಎನ್. ಪ್ರಹ್ಲಾದಾಚಾರ್ಯ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಶ್ರೀವತ್ಸ, ನಂ.43/13, ಕಾಮಾಕ್ಯ ಮೈನ್ ರೋಡ್, 4ನೇ ಕ್ರಾಸ್, 5ನೇ ಬ್ಲಾಕ್, ಬನಶಂಕರಿ 3ನೇ ಹಂತ. ಬೆಂಗಳೂರು-85.
5. ಆಡಳಿತ ಸಹಾಯಕರು, ಜಲಾನಯನ ಅಭಿವೃದ್ದಿ ಇಲಾಖೆ, ಕೇಂದ್ರ ಕಛೇರಿ, ಕಾವೇರಿಭವನ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ-1 ಕೃಷಿ ಇಲಾಖೆ.
8. ಸಂಬಂಧಿಸಿದ ಅಧಿಕಾರಿಗಳಿಗೆ (ಆಯುಕ್ತರು, ಜಲಾನಯನ ಅಭಿವೃದ್ದಿ ಇಲಾಖೆ ಇವರ ಮುಖಾಂತರ).
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.